**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕರ್ನಾಟಕ ಸರ್ಕಾರದ ಸಚಿವಾಲಯ ಹಾಗೂ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ **ಜಾಗೃತ ಕೋಶ**(Vigilance Cells)**ಗಳನ್ನು** ಚಾಲನೆಗೊಳಿಸುವ ಕುರಿತಂತೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

****

**ಓದಲಾಗಿದೆ:-**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಇಯು 2016, ದಿನಾಂಕ: 14.03.2016.

**ಪ್ರಸ್ತಾವನೆ:-**

ಮೇಲೆ ಓದಲಾದ ದಿನಾಂಕ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಸದರಿ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7ರ ಉದ್ಧೃತ ಭಾಗ ಈ ಕೆಳಕಂಡಂತಿದೆ:-

> "7. ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಗಳನ್ನೊಳಗೊಂಡಂತೆ ನಿರ್ದೇಶನಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಒಂದು **ಜಾಗೃತ ಕೋಶ**ವನ್ನು ಸೃಜಿಸುವಂತೆ ಆದೇಶಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಜಾಗೃತ ವಿಭಾಗವು ಈ ಜಾಗೃತ ಕೋಶಗಳ ಕಾರ್ಯನಿರ್ವಹಣೆಯ ಮೇಲ್ವಿಚಾರಣೆಯನ್ನು ಮಾಡುವುದು ಮತ್ತು ಮುಖ್ಯಮಂತ್ರಿಯವರ ಅನುಮೋದನೆಯೊಂದಿಗೆ ಪ್ರತ್ಯೇಕವಾಗಿ ಹೊರಡಿಸಲಾಗುವ ವಿವರವಾದ ಸೂಚನೆಗಳಡಿಯಲ್ಲಿ ಜಾಗೃತ ಕಾರ್ಯವನ್ನು ಕೈಗೊಳ್ಳುವುದು."

ದಿನಾಂಕ:14.03.2016ರ ಆದೇಶದನ್ವಯ, ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ತಮ್ಮ ಇಲಾಖೆ/ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಸೃಜಿಸಬೇಕಾಗಿದ್ದು, ತತ್ಸಂಬಂಧ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಇಯು 2016, ಬೆಂಗಳೂರು, ದಿನಾಂಕ: 22.06.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಇಯು 2016, ದಿನಾಂಕ:14.03.2016ರ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ, ಕೆಳಕಂಡ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ನೀಡಲಾಗಿದೆ:-

1. ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಮುಖ್ಯ ಜಾಗೃತ ಅಧಿಕಾರಿ**(Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗು ಆಯಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ನಂತರದ ಅಧಿಕಾರಿಯನ್ನು (officer next in seniority) **ಮುಖ್ಯ ಜಾಗೃತ ಅಧಿಕಾರಿ** (Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.

2. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಮುಖ್ಯ ಜಾಗೃತ ಅಧಿಕಾರಿ**(Chief Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಹಾಗೂ ಆಯಾ ಇಲಾಖಾ/ಸಂಸ್ಥೆಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) **ಮುಖ್ಯ ಜಾಗೃತ ಅಧಿಕಾರಿ**(Chief Vigilance Officer)ಯನ್ನಾಗಿ ನೇಮಿಸತಕ್ಕದ್ದು.

3. ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಚೇರಿಗಳನ್ನು ಹೊಂದಿದ್ದು, ಸದರಿ ಕಚೇರಿಗಳಲ್ಲಿ ಗಣನೀಯ ಸಿಬ್ಬಂದಿ (reasonable strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದು. ಈ ಜಾಗೃತ ಕೋಶಕ್ಕೆ **ಜಾಗೃತ ಅಧಿಕಾರಿ**(Vigilance Officer)ಯು ಮುಖ್ಯಸ್ಥರಾಗಿರುತ್ತಾರೆ. ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) **ಜಾಗೃತ ಅಧಿಕಾರಿ**(Vigilance Officer)ಯನ್ನಾಗಿ ನೇಮಿಸತಕ್ಕದ್ದು.

4. ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳ ಜಾಗೃತ ಅಧಿಕಾರಿಗಳು ಆಯಾ ಇಲಾಖೆ/ಸಂಸ್ಥೆಗಳ ಕೇಂದ್ರ ಕಚೇರಿಯ ಮುಖ್ಯ ಜಾಗೃತ ಅಧಿಕಾರಿಗಳಿಗೆ ವರದಿ ಮಾಡತಕ್ಕದ್ದು.

5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಆಯಾ ಜಿಲ್ಲೆಗಳ ಎಲ್ಲಾ ಇಲಾಖೆಗಳ ಸಂಬಂಧಪಟ್ಟ ಮುಖ್ಯ ಜಾಗೃತ ಅಧಿಕಾರಿಯ (Chief Vigilance Officer) ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ತಮ್ಮ ಇಲಾಖೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ. ಅದೇ ರೀತಿ, ಕ್ಷೇತ್ರ ಇಲಾಖೆ ಹಾಗು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಸಂಬಂಧಪಟ್ಟ ಇಲಾಖಾ/ಸಂಸ್ಥೆಗಳ ಮುಖ್ಯಸ್ಥರು ತಮ್ಮ ಇಲಾಖೆ/ಸಂಸ್ಥೆಗಳ ಮುಖ್ಯ ಜಾಗೃತ ಅಧಿಕಾರಿ/ಅವರ ತತ್ಸಮಾನ ಅಧಿಕಾರಿಗಳಿಗೆ ಮುಖ್ಯ ಜಾಗೃತ ಅಧಿಕಾರಿಯಾಗಿರುತ್ತಾರೆ.

7. ರಾಜ್ಯ ಆಡಳಿತಶಾಹಿಯ ಮುಖ್ಯಸ್ಥರಾಗಿರುವ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ರಾಜ್ಯದ **ಮುಖ್ಯ ಜಾಗೃತ ಆಯುಕ್ತರು** (Chief Vigilance Commissioner) ಆಗಿರುತ್ತಾರೆ.

2. ಮುಖ್ಯ ಜಾಗೃತ ಅಧಿಕಾರಿ ಮತ್ತು ಜಾಗೃತ ಅಧಿಕಾರಿಗಳ ಕರ್ತವ್ಯಪಟ್ಟಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ

(ಉಮಾ. ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು–2).

**ಇವರಿಗೆ:**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ ವಿಭಾಗ, ಬೆಂಗಳೂರು – ಇದನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಒದಗಿಸಲು **(ಮುಖಪತ್ರದೊಂದಿಗೆ)**

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.–560 001.
2. ಪ್ರಧಾನ ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು–560 001.

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು–560 001.
4. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
6. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ–1 ಮತ್ತು 2, ವಿಧಾನ ಸೌಧ, ಬೆಂಗಳೂರು.
7. ಎಲ್ಲಾ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
8. ರಾಜ್ಯಪಾಲರ ಜಂಟಿ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
10. ಎಲ್ಲಾ ಇಲಾಖಾ ಮುಖ್ಯಸ್ಥರು.
11. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
12. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
16. ಎಲ್ಲಾ ಸರ್ಕಾರದ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ಶಾಖಾಧಿಕಾರಿಗಳು.
17. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

**"ಮಾದರಿ"**

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಗಳನ್ನು ನೇಮಿಸುವ ಬಗ್ಗೆ.

****

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯ 2016, ದಿ:14.03.2016.
2. ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 88 ಸೇಲೋಯ 2016, ದಿ:22.06.2016.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿ:22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿ:14.03.2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿ:22.06.2016ರ ಆದೇಶದ ಆದೇಶ ಭಾಗದ ಕಂಡಿಕೆ 1(1)ರಲ್ಲಿ ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದ್ದೆಂದೂ ಹಾಗೂ ಆಯಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ನಂತರದ (officer next in seniority) ಅಧಿಕಾರಿಯನ್ನು ಸದರಿ ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ (Chief Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿರುತ್ತದೆ.

ಅದರಂತೆ ಪರಿಶೀಲಿಸಿ, __________ ಇಲಾಖೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: , ಬೆಂಗಳೂರು, ದಿ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರದ ಸಚಿವಾಲಯದ ________________ಇಲಾಖೆಗೆ ಸಂಬಂಧಿಸಿದಂತೆ, ಸರ್ಕಾರದ __________ಕಾರ್ಯದರ್ಶಿ, (ಪದನಾಮ:ವಿಶೇಷ/ಅಪರ/ಜಂಟಿ/ಉಪ) ಇವರನ್ನು ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ

ಇತ್ಯಾದಿ,

**"ಮಾದರಿ"**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆ/ನಿರ್ದೇಶನಾಲಯ/ಆಯುಕ್ತಾಲಯ, ನಿಗಮ/ಮಂಡಳಿಗಳ ಕೇಂದ್ರಸ್ಥಾನದ ಕಚೇರಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ (Chief Vigilance Officer)ಗಳನ್ನು ನೇಮಿಸುವ ಬಗ್ಗೆ.

****

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯ 2016, ದಿ:14.03.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯ 2016, ದಿ:22.06.2016.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿ:22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿ:14.03.2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿ:22.06.2016ರ ಆದೇಶದ ಆದೇಶ ಭಾಗದ ಕಂಡಿಕೆ 1(2)ರಲ್ಲಿ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರಸ್ಥಾನದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದೆಂದೂ ಹಾಗೂ ಆಯಾ ಇಲಾಖೆ/ಸಂಸ್ಥೆಗಳ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಸದರಿ ಜಾಗೃತ ಕೋಶದ **ಮುಖ್ಯ ಜಾಗೃತ ಅಧಿಕಾರಿ**(Chief Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿರುತ್ತದೆ.

ಅದರಂತೆ ಪರಿಶೀಲಿಸಿ, ______ ಇಲಾಖೆಗೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: , ಬೆಂಗಳೂರು, ದಿ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ______ ಇಲಾಖೆಯ (ನಿರ್ದೇಶನಾಲಯ/ಆಯುಕ್ತಾಲಯ/ನಿಗಮ/ಮಂಡಳಿ ಇತ್ಯಾದಿ) ಕೇಂದ್ರ ಕಚೇರಿಗೆ ಸಂಬಂಧಿಸಿದಂತೆ, ______ (ಪದನಾಮ, ಇಲಾಖಾ/ಸಂಸ್ಥೆಯ ಮುಖ್ಯಸ್ಥರ ನಂತರದ ಅಧಿಕಾರಿ), ಇವರನ್ನು ಮುಖ್ಯ ಜಾಗೃತ ಅಧಿಕಾರಿ(Chief Vigilance Officer)ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ,

ಇತ್ಯಾದಿ,

**"ಮಾದರಿ"**

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಸರ್ಕಾರದ ಎಲ್ಲಾ ಕ್ಷೇತ್ರ ಇಲಾಖೆ/ನಿರ್ದೇಶನಾಲಯ/ ಆಯುಕ್ತಾಲಯ, ನಿಗಮ/ಮಂಡಳಿಗಳ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಿಗೆ ಸಂಬಂಧಿಸಿದಂತೆ ಜಾಗೃತ ಅಧಿಕಾರಿ(Vigilance Officer)ಗಳನ್ನು ನೇಮಿಸುವ ಬಗ್ಗೆ.

****

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 14 ಸೇಲೋಯು 2016, ದಿ:14.03.2016.
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016, ದಿ:22.06.2016.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿ:14.03.2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿ:22.06.2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿ:14.03.2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ ಕಂಡಿಕೆ 7ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳಲ್ಲಿ ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಸದರಿ ಆದೇಶದ ಆದೇಶ ಭಾಗದ ಕಂಡಿಕೆ 1(3)ರಲ್ಲಿ ಸರ್ಕಾರದ ಪ್ರತಿಯೊಂದು ಕ್ಷೇತ್ರ ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಸಾರ್ವಜನಿಕ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗು ಎಲ್ಲಾ ಶಾಸನಬದ್ಧ ಸಂಸ್ಥೆಗಳು ವಿಭಾಗ ಮತ್ತು ಜಿಲ್ಲಾ ಮಟ್ಟದಲ್ಲಿ ಕಚೇರಿಗಳನ್ನು ಹೊಂದಿದ್ದು, ಸದರಿ ಕಚೇರಿಗಳಲ್ಲಿ ಗಣನೀಯ ಸಿಬ್ಬಂದಿ (reasonable strength) ಇದ್ದಲ್ಲಿ, ಆ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ಒಂದು **ಜಾಗೃತ ಕೋಶ** ಇರತಕ್ಕದ್ದೆಂದೂ ಹಾಗೂ ಸದರಿ ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿಯನ್ನು (officer next in seniority) ಸದರಿ ಜಾಗೃತ ಕೋಶದ **ಜಾಗೃತ ಅಧಿಕಾರಿ**(Vigilance Officer)ಯನ್ನಾಗಿ ನೇಮಿಸಲು ಆದೇಶಿಸಲಾಗಿದೆ.

ಅದರಂತೆ ಪರಿಶೀಲಿಸಿ, ______ ಇಲಾಖೆ/ಸಂಸ್ಥೆಯ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗೆ ಸಂಬಂಧಿಸಿದಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: , ಬೆಂಗಳೂರು, ದಿ:**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ______________ ಇಲಾಖೆಯ (ನಿರ್ದೇಶನಾಲಯ/ಆಯುಕ್ತಾಲಯ/ನಿಗಮ/ಮಂಡಳಿ ಇತ್ಯಾದಿ) _________ ವಿಭಾಗ/ಜಿಲ್ಲಾ ಮಟ್ಟದ ಕಚೇರಿಗೆ ಸಂಬಂಧಿಸಿದಂತೆ, ___________ (ವಿಭಾಗ/ಜಿಲ್ಲಾ ಮಟ್ಟದ ಕಚೇರಿಯ ಮುಖ್ಯಸ್ಥರ ನಂತರದ ಅಧಿಕಾರಿ), ಇವರನ್ನು ಜಾಗೃತ ಅಧಿಕಾರಿ(Vigilance Officer)ಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ,

ಇತ್ಯಾದಿ,